# ವಿನೂತನ ಆವಿಷ್ಕಾರಗಳಿಂದ ಅಭಿವೃದ್ಧಿಗೆ ಕೊಡುಗೆ ನೀಡಲಿ



ಹಳಿಯಾಳ, ಮೇ. 16: ವಿದ್ಯಾರ್ಥಿಗಳು ವಿನೂತನ ಆವಿಷ್ಕಾರಗಳಿಂದ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಶಾಸಕ, ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ. ದೇಶಪಾಂಡೆ ಸಲಹೆ ನೀಡಿದರು.

ಪಟ್ಟಣದ ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ಸಾಂಸ್ಕೃತಿಕ ಉತ್ಸವ ಉಮಂಗ್– 2025 ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣ ನೀಡುತ್ತ ಬಂದಿರುವ ವಿಡಿಐಟಿಯ ಕಾರ್ಯವೈಖರಿ ಶ್ಲಾಘಿಸಿದರು.

ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷ ಪ್ರಶಾಂತ ಕುಲಕರ್ಣಿ, ಕೆಎಲ್ಎಸ್ ಸದಸ್ಯ ಆರ್.ಎಸ್. ಮುತಾಲಿಕ, ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ಸಿಪಿಐ ಜಯಪಾಲ್ ಪಾಟೀಲ, ವಿಆರ್ಡಿಎಂ ಆಡಳಿತಾಧಿಕಾರಿ ಪ್ರಕಾಶ ಪ್ರಭು ಇದ್ದರು. ಉಮಂಗ್– 2025ರ ಪ್ರಯುಕ್ತ ಮೇ 13 ಹಾಗೂ 14ರಂದು ನೃತ್ಯ ಹಾಗೂ ಸಂಗೀತ ಮನರಂಜನಾ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕನ್ನಡ ಚಿತ್ರರಂಗದ ಖ್ಯಾತ ಹಿನ್ನೆಲೆ ಗಾಯಕಿ ಅನುರಾಧ ಭಟ್ ಹಾಗೂ ತಂಡದವರು ಸಂಗೀತ ರಸಮಂಜರಿ ಕಾರ್ಯಕ್ರಮ ನಡೆಸಿಕೊಟ್ಟರು.

# ವಿಜೃಂಭಣೆಯಿಂದ ಜರುಗಿದ ವಿಡಿಐಟಿ ಸಾಂಸ್ಕೃತಿಕ ಉತ್ಸವ





ಹಳಿಯಾಳ: ವಿದ್ಯಾರ್ಥಿಗಳೇ ದೇಶದ ಭವಿಷ್ಯ ಮತ್ತು ಅತೀ ದೊಡ್ಡ ಆಸ್ತಿ ಎಂದು ದಾಂಡೇಲಿ, ಹಳಿಯಾಳ ಹಾಗೂ ಜೋಯಿಡಾ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರು ಹಾಗೂ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ, ಹಿರಿಯ ರಾಜಕಾರಣಿ ಶ್ರೀ. ಆರ್. ವಿ. ದೇಶಪಾಂಡೆ ಅವರು ಹೇಳಿದರು.

ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದ ವಾರ್ಷಿಕ ಸಾಂಸ್ಕೃತಿಕ ಉತ್ಸವ "ಉಮಂಗ್ 2025" ನಲ್ಲಿ ಮೇ 14 ರಂದು ಭಾಗವಹಿಸಿ ಮಾತನಾಡಿದ ಶ್ರೀ ಆರ್. ವಿ. ದೇಶಪಾಂಡೆ ಅವರು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣ ನೀಡುತ್ತ ಬಂದಿರುವ ವಿ ಡಿ ಐ ಟಿ ಯ ಕಾರ್ಯವೈಖರಿಯನ್ನು ಶ್ಲಾಘಿಸಿದರು. ವಿದ್ಯಾರ್ಥಿಗಳು ವಿನೂತನ ಆವಿಷ್ಕಾರಗಳಿಂದ ದೇಶದ ಅಭಿವೃದ್ಧಿಗೆ ತಮ್ಮ ಯೋಗದಾನವನ್ನು ನೀಡಬೇಕೆಂದು ಕರೆ ನೀಡಿದರು. ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷ ಪ್ರಶಾಂತ್ ಕುಲಕರ್ಣಿ , ಕೆ ಎಲ್ ಎಸ್ ಸದಸ್ಯ ಆರ್. ಎಸ್. ಮುತಾಲಿಕ್ ಹಾಗೂ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಸಿ ಪಿ ಐ ಜಯಪಾಲ್ ಪಾಟೀಲ್, ವಿ ಆರ್ ಡಿ ಎಂ ಆಡಳಿತಾಧಿಕಾರಿ ಪ್ರಕಾಶ್ ಪ್ರಭು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

"ಉಮಂಗ್ 2025" ರ ಪ್ರಯುಕ್ತ ಮೇ 13 ಹಾಗೂ 14ರಂದು ನೃತ್ಯ ಹಾಗೂ ಸಂಗೀತ ಮನರಂಜನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಮೇ 13 ರಂದು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಬೋಧಕ ಸಿಬ್ಬಂದಿಗಳು ಹಾಡು ಹಾಗೂ ನೃತ್ಯವನ್ನು ಪ್ರದರ್ಶಿಸಿದರು. ಮೇ 14ರಂದು ಕನ್ನಡ ಚಿತ್ರರಂಗದ ಖ್ಯಾತ ಹಿನ್ನೆಲೆ ಗಾಯಕಿ ಅನುರಾಧ ಭಟ್ ಹಾಗೂ ತಂಡದವರು ಸಂಗೀತ ರಸಮಂಜರಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಸುಮಾರು ಮೂರು ಗಂಟೆಗಳ ಕಾಲ ಸಂಗೀತ ಸುಧೆಯನ್ನು ಹರಿಸಿ ಅನುರಾಧ ಭಟ್ ಹಾಗೂ ತಂಡದವರು ಮನರಂಜಿಸಿದರು. ಸುಮಾರು 1600ಕ್ಕೂ ಅಧಿಕ ವಿದ್ಯಾರ್ಥಿಗಳು, ಬೋಧಕ ಬೋಧಕೇತರ ಸಿಬ್ಬಂದಿಗಳು ಈ ಸಂಗೀತ ಸಂಜೆಯಲ್ಲಿ ಭಾಗವಹಿಸಿದ್ದರು.

ಈ ಕಾರ್ಯಕ್ರಮವನ್ನು ಡಾ. ಮಹೇಂದ್ರ ದೀಕ್ಷಿತ್, ಪ್ರೊ, ರಾಜೇಶ್ವರಿ ಎನ್, ಡಾ. ಪೂರ್ಣಿಮಾ ರಾಯ್ಕರ್, ಡಾ. ಶ್ರೀನಿವಾಸ ಸರ್ ದೇಶಪಾಂಡೆ, ಪ್ರೊ, ಸುಧೀರ್ ಕುಲಕರ್ಣಿ ಸಂಯೋಜಿಸಿದ್ದರು.

# ವಿನೂತನ ಆವಿಷ್ಕಾರಗಳಿಂದ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಲಿ

■ ವಿಜಯವಾಣಿ ಸುದ್ದಿಜಾಲ ಹಳಿಯಾಳ


ವಿದ್ಯಾರ್ಥಿಗಳು ವಿನೂತನ ಆವಿಷ್ಕಾರಗಳಿಂದ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಶಾಸಕ, ರಾಜ್ಯ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ. ದೇಶಪಾಂಡೆ ಸಲಹೆ ನೀಡಿದರು.

ಬುಧವಾರ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ಸಾಂಸ್ಕೃತಿಕ ಉತ್ಸವ ಉಮಂಗ್- 2025 ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣ ನೀಡುತ್ತ ಬಂದಿರುವ ವಿಡಿಐಟಿಯ ಕಾರ್ಯವೈಖರಿ ಶ್ಲಾಘಿಸಿದರು.

ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷ ಪ್ರಶಾಂತ ಕುಲಕರ್ಣಿ, ಕೆಎಲ್‌ಎಸ್ ಸದಸ್ಯ ಆರ್.ಎಸ್. ಮುತಾಲಿಕ, ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ಸಿಪಿಐ ಜಯಪಾಲ್ ಪಾಟೀಲ, ವಿಆರ್‌ಡಿಎಂ ಆಡಳಿತಾಧಿಕಾರಿ ಪ್ರಕಾಶ ಪ್ರಭು ಇದ್ದರು.

ಉಮಂಗ್- 2025ರ ಪ್ರಯುಕ್ತ ಮೇ 13 ಹಾಗೂ 14ರಂದು ನೃತ್ಯ ಹಾಗೂ ಸಂಗೀತ ಮನರಂಜನಾ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕನ್ನಡ ಚಿತ್ರರಂಗದ ಖ್ಯಾತ ಹಿನ್ನೆಲೆ ಗಾಯಕಿ ಅನುರಾಧ ಭಟ್ ಹಾಗೂ ತಂಡದವರು ಸಂಗೀತ ರಸಮಂಜರಿ ಕಾರ್ಯಕ್ರಮ ನಡೆಸಿಕೊಟ್ಟರು.

ಈ ಕಾರ್ಯಕ್ರಮವನ್ನು ಡಾ. ಮಹೇಂದ್ರ ದೀಕ್ಷಿತ್, ಪ್ರೊ. ರಾಜೇಶ್ವರಿ ಎನ್. ಡಾ. ಪೂರ್ಣಿಮಾ ರಾಯ್ಕರ್, ಡಾ. ಶ್ರೀನಿವಾಸ, ದೇಶಪಾಂಡೆ, ಪ್ರೊ. ಸುಧೀರ ಕುಲಕರ್ಣಿ ಸಂಯೋಜಿಸಿದ್ದರು.



ಹಳಿಯಾಳ ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಏರ್ಪಡಿಸಿದ್ದ ವಾರ್ಷಿಕ ಸಾಂಸ್ಕೃತಿಕ ಉತ್ಸವ ಉಮಂಗ್- 2025 ಕಾರ್ಯಕ್ರಮದಲ್ಲಿ ಶಾಸಕ ಆರ್.ವಿ. ದೇಶಪಾಂಡೆ ಮಾತನಾಡಿದರು. ಪ್ರಮುಖರಾದ ಪ್ರಶಾಂತ ಕುಲಕರ್ಣಿ , ಆರ್.ಎಸ್. ಮುತಾಲಿಕ, ಡಾ. ವಿ.ಎ. ಕುಲಕರ್ಣಿ ಇದ್ದರು.

# ವಿಜೃಂಭಣೆಯಿಂದ ನಡೆದ ವಿಡಿಐಟಿ ಸಾಂಸ್ಕೃತಿಕ ಉತ್ಸವ

**»ಜನಮಾಧ್ಯಮ, ಹಳಿಯಾಳ:** ವಿದ್ಯಾರ್ಥಿಗಳೇ ದೇಶದ ಭವಿಷ್ಯ ಮತ್ತು ಅತೀ ದೊಡ್ಡ ಆಸ್ತಿ ಎಂದು ದಾಂಡೇಲಿ, ಹಳಿಯಾಳ ಹಾಗೂ ಜೊಯಿಡಾ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ, ಹಿರಿಯ ರಾಜಕಾರಣಿ ಆರ್. ವಿ. ದೇಶಪಾಂಡೆ ಹೇಳಿದರು.

ಕೆಎಲ್ಎಸ್ ವಿಡಿಐಟಿ ಹಳಿಯಾಳದ ವಾರ್ಷಿಕ ಸಾಂಸ್ಕೃತಿಕ ಉತ್ಸವ "ಉಮಂಗ್ 2025" ನಲ್ಲಿ ಮೇ 14 ರಂದು ಭಾಗವಹಿಸಿ ಮಾತನಾಡಿದ ಅವರು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣ ನೀಡುತ್ತ ಬಂದಿರುವ ವಿ ಡಿ ಐ ಟಿ ಯ ಕಾರ್ಯವೈಖರಿಯನ್ನು ಶ್ಲಾಘಿಸಿದರು. ವಿದ್ಯಾರ್ಥಿಗಳು ವಿನೂತನ ಆವಿಷ್ಕಾರಗಳಿಂದ ದೇಶದ ಅಭಿವೃದ್ಧಿಗೆ ತಮ್ಮ ಯೋಗದಾನವನ್ನು ನೀಡಬೇಕೆಂದು ಕರೆ ನೀಡಿದರು. ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷ ಪ್ರಶಾಂತ್ ಕುಲಕರ್ಣಿ ,ಕೆ ಎಲ್



ಎಸ್ ಸದಸ್ಯ ಆರ್. ಎಸ್. ಮುತಾಲಿಕ್ ಹಾಗೂ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಸಿ ಪಿ ಐ ಜಯಪಾಲ್ ಪಾಟೀಲ್, ವಿಆರ್‌ಡಿಎಂ ಆಡಳಿತಾಧಿಕಾರಿ ಪ್ರಕಾಶ್ ಪ್ರಭು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

"ಉಮಂಗ್ 2025" ರ ಪ್ರಯುಕ್ತ ಮೇ 13 ಹಾಗೂ 14ರಂದು ನೃತ್ಯ ಹಾಗೂ ಸಂಗೀತ ಮನರಂಜನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಮೇ 13 ರಂದು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಬೋಧಕ ಸಿಬ್ಬಂದಿಗಳು ಹಾಡು ಹಾಗೂ ನೃತ್ಯವನ್ನು ಪ್ರದರ್ಶಿಸಿದರು. ಮೇ 14ರಂದು ಕನ್ನಡ ಚಿತ್ರರಂಗದ ಖ್ಯಾತ ಹಿನ್ನೆಲೆ ಗಾಯಕಿ ಅನುರಾಧ ಭಟ್ ಹಾಗೂ ತಂಡದವರು ಸಂಗೀತ ರಸಮಂಜರಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಸುಮಾರು ಮೂರು ಗಂಟೆಗಳ ಕಾಲ ಸಂಗೀತ ಸುಧೆಯನ್ನು ಹರಿಸಿ ಅನುರಾಧ ಭಟ್ ಹಾಗೂ ತಂಡದವರು ಮನರಂಜಿಸಿದರು. ಸುಮಾರು 1600ಕ್ಕೂ ಅಧಿಕ ವಿದ್ಯಾರ್ಥಿಗಳು, ಬೋಧಕ ಬೋಧಕೇತರ ಸಿಬ್ಬಂದಿಗಳು ಈ ಸಂಗೀತ ಸಂಜೆಯಲ್ಲಿ ಭಾಗವಹಿಸಿದ್ದರು.

ಈ ಕಾರ್ಯಕ್ರಮವನ್ನು ಡಾ. ಮಹೇಂದ್ರ ದೀಕ್ಷಿತ್, ಪ್ರೊ. ರಾಜೇಶ್ವರಿ ಎನ್, ಡಾ. ಪೂರ್ಣಿಮಾ ರಾಯ್ಕರ್, ಡಾ. ಶ್ರೀನಿವಾಸ ಸರ್‌ದೇಶಪಾಂಡೆ, ಪ್ರೊ. ಸುಧೀರ್ ಕುಲಕರ್ಣಿ ಸಂಯೋಜಿಸಿದ್ದರು.

Main Edition
May 16, 2025 Page No. 5
Powered by: janamadhyama.news